ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅರಣ್ಯ ಪ್ರದೇಶದ ಅಂಚಿನಲ್ಲಿರುವ ಖಾಸಗಿ ಭೂಮಿಯನ್ನು ಸರ್ಕಾರ ಖರೀದಿಸುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

601 (633) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅರಣ್ಯ ಪ್ರದೇಶದ ಅಂಚಿನಲ್ಲಿರುವ ರೈತರು/ಖಾಸಗಿಯವರು ಅಲ್ಲಿ ಬೆಳೆಗಳನ್ನು ಬೆಳೆಯಲು ಸಾಧ್ಯವಾಗದೆ ತಮ್ಮ ಜಮೀನುಗಳನ್ನು ಅರಣ್ಯ ಇಲಾಖೆಗೆ ಮಾರಾಟ ಮಾಡಲು ತಯಾರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖಾಸಗಿಯವರಿಂದ ಜಮೀನುಗಳನ್ನು ಕೊಳ್ಳಲು ಸರ್ಕಾರದ ಕ್ರಮಗಳೇನು; (ವಿವರ ನೀಡುವುದು)

(ಆ) ಇಂತಹ ಭೂಮಿಗಳನ್ನು ಕಳೆದ ಮೂರು ವರ್ಷಗಳಲ್ಲಿ ಕೊಂಡುಕೊಂಡಿದ್ದಲ್ಲಿ ಅವರ ವಿಸ್ತೀರ್ಣ ಹಾಗೂ ದರಗಳ ಮಾಹಿತಿ ನೀಡುವುದು;

(ಇ) ಕೊಡಗು ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಯಾವುದಾದರೂ ಇವೆಯೇ; ಇದ್ದಲ್ಲಿ, ಅವುಗಳ ವಿವರಗಳನ್ನು ನೀಡುವುದು ಹಾಗೂ ಇಂತಹ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಆಗಿರುವ ಪ್ರಗತಿಯ ಪೂರ್ಣ ವಿವರಗಳನ್ನು ನೀಡುವುದು;

(ಈ) ಕಳೆದ ಮೂರು ವರ್ಷಗಳಲ್ಲಿ ಇಂತಹ ಪ್ರಕರಣಗಳಿಗೆ ಸರ್ಕಾರವು ನೀಡಲಾಗಿರುವ ಅನುದಾನವೆಷ್ಟು? (ಪೂರ್ಣ ವಿವರ ನೀಡುವುದು)